ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	512
ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	21/02/2022
ಉತ್ತರಿಸುವ ಸಚಿವರು	ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	2014ರಲ್ಲಿ ಪ್ರಾರಂಭವಾದ ಬೀದರ್ ಜಿಲ್ಲೆಯ ಮಹಿಳಾ ಪದವಿ ಮಹಾವಿದ್ಯಾಲಯಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ಪ್ರಸ್ತುತ ಸದರಿ ಮಹಾವಿದ್ಯಾಲಯವನ್ನು ಒಂದು ಸರ್ಕಾರಿ ಪ್ರೌಢ ಶಾಲೆಯ ಕಟ್ಟಡದಲ್ಲಿ ತಾತ್ಕಾಲಿಕವಾಗಿ ನಡೆಸುತ್ತಿದ್ದು, ಇದಕ್ಕೆ ಮೂಲಭೂತ ಸೌಕರ್ಯ ಇಲ್ಲದೇ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಇ)	ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ಕಟ್ಟಡದಲ್ಲಿ ತಾತ್ಕಾಲಿಕವಾಗಿ ನಡೆಯುತ್ತಿರುವ ಮಹಿಳಾ ಪದವಿ ಮಹಾವಿದ್ಯಾಲಯಕ್ಕೆ ಕಟ್ಟಡದ ಆಸ್ತಿ ವರ್ಗಾವಣೆ ಮಾಡಿಕೊಡುವ ಯೋಚನೆ ಸರ್ಕಾರದ ಮುಂದಿದೆಯೇ;	ಪ್ರಸ್ತುತ ಸದರಿ ಕಾಲೇಜು ಬೀದರ್ ಪಟ್ಟಣದ ಸರ್ಕಾರಿ ಎಂ.ಪಿ. ಪ್ರೌಢ ಶಾಲೆ ಹೆಸರಿನಲ್ಲಿದ್ದು, ಸದರಿ ಕಟ್ಟಡ/ನಿವೇಶನವನ್ನು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ ವರ್ಗಾಯಿಸುವಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯನ್ನು ಕೋರಲಾಗಿದೆ.
(ಈ)	ವರ್ಗಾವಣೆ ಮಾಡಿಕೊಡುವುದಾದರೆ ಯಾವ ಕಾಲಮಿತಿಯೊಳಗೆ ಮಾಡಿಕೊಡಲಾಗುವುದು; ಈ ಬಗ್ಗೆ ಕೈಗೊಂಡಿರುವ ಕ್ರಮವೇನು?	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಿಂದ ಅನುಮೋದನೆ ಬಂದ ಕೂಡಲೇ ವರ್ಗಾವಣೆ ಮಾಡಿಕೊಳ್ಳಲಾಗುವುದು.

ಕಡತ ಸಂಖ್ಯೆ: ಇಡಿ 33 ಹೆಚ್‌ಪಿಸಿ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ
ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು